12-14

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಯವರಿಗೆ ಹಂಚಿಕೆಯಾಗಿರುವ 477.36 ಮೆ.ವ್ಯಾ. ಸಾಮರ್ಥ್ಯದ ಯೋಜನೆಯಲ್ಲಿ ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಅಂಶಿಕ ಸಾಮರ್ಥ್ಯವಾದ 60.15 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯನ್ನು 300 ಮೆ.ವ್ಯಾ.ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 302 ಎನ್‌ಸಿಇ 2006 ದಿನಾಂಕ: 16.10.2006.
2) ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 302 ಎನ್‌ಸಿಇ 2011 ದಿನಾಂಕ: 07.1.2012.
3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/08/VWILLP-(60.15 to 300 MW)/2013/1206 ದಿನಾಂಕ: 22/23.05.2013.
4) ದಿನಾಂಕ 11.3.2013ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ:-**

ಮೇಲೆ ಓದಲಾದ (1) ರ ಸರ್ಕಾರಿ ಆದೇಶದಲ್ಲಿ ಮೆ:: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಗೆ ಕೋಲಾರ, ತುಮಕೂರು, ದಾವಣಗೆರೆ, ಬೆಂಗಳೂರು ಗ್ರಾಮೀಣ, ಹಾಸನ, ಶಿವಮೊಗ್ಗ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಒಟ್ಟು 477.36 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು ಮತ್ತು ಮೇಲೆ ಕ್ರಮ ಸಂಖ್ಯೆ (2) ರ ತಿದ್ದುಪಡಿ ಆದೇಶದಲ್ಲಿ ಮೇಲಿನ ಆದೇಶ ಭಾಗದ ಕ್ರಮ ಸಂಖ್ಯೆ (4)ರಲ್ಲಿ ನಮೂದಿಸಲಾಗಿರುವ ಅಯ್ಯನ ಹಳ್ಳಿ, ಬೀಶನಹಳ್ಳಿ, ಹೊಸಹಳ್ಳಿ, ಮಾರಿಕಟ್ಟೆ, ನಿಂಬಳಗೇರೆ, ದಾವಣಗೆರೆ ಜಿಲ್ಲೆ ಎಂಬುದರ ಬದಲಾಗಿ ಅಯ್ಯನ ಹಳ್ಳಿ, ಬೀಶನಹಳ್ಳಿ, ಹೊಸಹಳ್ಳಿ, ಮಾರಿಕಟ್ಟೆ, ದಾವಣಗೆರೆ ಜಿಲ್ಲೆ ಮತ್ತು ನಿಂಬಳಗೇರೆ, ಬಳ್ಳಾರಿ ಜಿಲ್ಲೆ ಎಂದು ತಿದ್ದುಪಡಿಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (3)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ : ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಯವರಿಗೆ ಕೋಲಾರ, ತುಮಕೂರು, ದಾವಣಗೆರೆ, ಬೆಂಗಳೂರು ಗ್ರಾಮೀಣ, ಹಾಸನ, ಶಿವಮೊಗ್ಗ, ಧಾರವಾಡ ಮತ್ತು ಬಳ್ಳಾರಿ ಜಿಲ್ಲೆಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 477.36 ಮೆ.ವ್ಯಾ ಸಾಮರ್ಥ್ಯದ ಯೋಜನೆಯಲ್ಲಿ ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಅಂಶಿಕ ಸಾಮರ್ಥ್ಯವಾದ 60.15 (51.90 + 8.25) ಮೆ.ವ್ಯಾ. ಪವನ ವಿದ್ಯುತ್ ಯೋಜನೆಯನ್ನು 300.00 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತಂತೆ ಸದರಿ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ, ಅರಣ್ಯ ಮತ್ತು ಕಂದಾಯ ಜಮೀನಾಗಿರುವುದಾಗಿ, ಕೋರಿರುವ ಹೆಚ್ಚುವರಿ ಸಾಮರ್ಥ್ಯಕ್ಕೆ ಈ ಹಿಂದೆ ಪ್ರಸ್ತಾಪಿಸಿರುವ ಸ್ಥಳದಲ್ಲಿಯೇ ಹೆಚ್ಚಿನ ಸಾಮರ್ಥ್ಯಗಳ ಟರ್ಬೈನ್‌ಗಳನ್ನು ಅಳವಡಿಸುವುದಾಗಿ ತಿಳಿಸಿ, ಸಾಮರ್ಥ್ಯ ಹೆಚ್ಚಳ ಶುಲ್ಕದ ಬಾಬ್ತು ಬಾಕಿ ಇರುವ ₹1,63,83,500.00ಗಳನ್ನು ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಪಾವತಿಸುವ ಮತ್ತು ಉತ್ಪಾದನೆ ಆಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ 3ನೇ ವ್ಯಕ್ತಿಗೆ ಮಾರಾಟಮಾಡುವ ಮತ್ತು ಸ್ವಂತ ಬಳಕೆಗಾಗಿ ಉಪಯೋಗಿಸಿಕೊಳ್ಳುವ/ಪಿಪಿಎ/ಆರ್‌ಇಸಿ ಮಾಡಿಕೊಳ್ಳುವ ಹಾಗೂ ಈ ಯೋಜನೆಯ ಒಟ್ಟು ಸಾಮರ್ಥ್ಯದಲ್ಲಿ 200 ಮೆ.ವ್ಯಾ. ಸಾಮರ್ಥ್ಯವನ್ನು 2013ರೊಳಗೆ ಮತ್ತು ಉಳಿದ ಸಾಮರ್ಥ್ಯವನ್ನು 2014ರ ಅಂತ್ಯದ ಒಳಗೆ ಅನುಷ್ಠಾನಗೊಸುವ ಷರತ್ತಿಗೊಳಪಟ್ಟು ದಿನಾಂಕ 11.03.2013ರ ಹಂಚಿಕೆ ಸಮಿತಿಯ ನಿರ್ಣಯದಂತೆ ಸಾಮರ್ಥ್ಯವನ್ನು ಹೆಚ್ಚಿಸಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (4)ರ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ : ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ರವರಿಗೆ ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಯ ಜೋಗಿಹಳ್ಳಿ ಪ್ರಾಜೆಕ್ಟ್‌ನ ವಿವಿಧ ಗ್ರಾಮಗಳಲ್ಲಿ ಈಗಾಗಲೇ ಹಂಚಿಕೆಯಾಗಿರುವ 60.15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 300 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತು ಅಭಿವೃದ್ಧಿದಾರರು ಬಾಕಿ ಉಳಿಸಿಕೊಂಡಿರುವ ಅರ್ಜಿ ಮತ್ತು ಡಿಪಿಆರ್ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸುವ ಷರತ್ತಿಗೊಳಪಟ್ಟು ಪ್ರಸ್ತಾವನೆಗೆ ಸಮಿತಿಯು ಅನುಮೋದನೆ ನೀಡಿರುತ್ತದೆ.

.....2)

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 128 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 30.05.2013.**

ಮೆ : ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್‌ಎಲ್‌ಪಿ ಕಂಪನಿಯವರಿಗೆ ಕೋಲಾರ, ತುಮಕೂರು, ದಾವಣಗೆರೆ, ಬೆಂಗಳೂರು ಗ್ರಾಮೀಣ, ಹಾಸನ, ಶಿವಮೊಗ್ಗ, ಧಾರವಾಡ ಮತ್ತು ಬಳ್ಳಾರಿ ಜಿಲ್ಲೆಗಳ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 477.36 ಮೆ.ವ್ಯಾ ಸಾಮರ್ಥ್ಯದ ಆದೇಶದ ಕ್ರಮ ಸಂಖ್ಯೆ (4)ರಲ್ಲಿ ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಅಂಶಿಕ ಸಾಮರ್ಥ್ಯವಾದ 60.15 (51.90 + 8.25) ಮೆ.ವ್ಯಾ. ಪವನ ವಿದ್ಯುತ್ ಯೋಜನೆಯನ್ನು 300.00 ಮೆ.ವ್ಯಾ. ಸಾಮರ್ಥ್ಯಕ್ಕೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ:-

**SHEDULE**

| Sl No. | Geographical Area details | Sanctioned capacity in MW | Enhancement proposed in MW | Total Capacity in MW (No. of WTGs & rating in KW) |
|---|---|---|---|---|
| 1 | The proposed place is a very vast area comprising of forests, Non-forest hills and high plains. The area is having eucalyptus plantation agricultural activities and is situated in Anaburu SF, Nimbalagiri RF and Snivkalu RF. The major orientation of the area is in the North south direction and is held between several villages as described in column 4. The area has several number of peaks and is held in the following Geographical co-ordinates:<br>**Latitude**: 14°34'36"- 14°45'0" N<br>**Longitude**: 76°20'0"- 76°27'26" E<br>**Ridge peaks:** 671, 696, 808, 772, 683, 788, 765, 665, 683, 693, 664, 681, 685, 711, 691, 730 and 794m Amsl. | 51.90MW<br>(70x330kW)<br>(48x600kW) | 239.85 | 300MW<br>(375x800 KW) |
| 2 | Identified area is situated on the North east of Kenchenahalli and has non-contiguous ridges with an open scrub feature. It has 4 peaks and is covered in the following Geographical co-ordinates:<br>**Latitude**: 14°33'3"- 14°36'40" N<br>**Longitude**: 76°17'54"- 76°20'54" E<br>**Ridge peaks:** 739, 745 and 730m Amsl. | 8.25MW<br>(25x330kW) | | |
| | TOTAL | 60.15 MW | 239.85 MW | 300 MW |

......3.

1 ಮೆ:: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್ಎಲ್‌ಪಿ ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಮೆ:: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್ಎಲ್‌ಪಿ ರವರು ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟಮಾಡಲು ಮತ್ತು ಸ್ವಂತಕ್ಕೆ ಬಳಸಿಕೊಳ್ಳಲು/ಪಿಪಿಎ/ಆರ್‌ಇಸಿ ಮುಖಾಂತರ ಮಾಡಿಕೊಳ್ಳಲು ಅನುಮತಿಸಿದೆ.

3 ಮೆ:: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್ಎಲ್‌ಪಿ ರವರು ಯೋಜನೆಯ ಒಟ್ಟು ಸಾಮರ್ಥ್ಯದಲ್ಲಿ 200 ಮೆ.ವ್ಯಾ. ಸಾಮರ್ಥ್ಯವನ್ನು 2013ರೊಳಗೆ ಮತ್ತು ಉಳಿದ ಸಾಮರ್ಥ್ಯವನ್ನು 2014ರ ಅಂತ್ಯದ ಒಳಗೆ ಅನುಷ್ಠಾನಗೊಳಿಸತಕ್ಕದ್ದು.

4 ಮೆ:: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್ಎಲ್‌ಪಿ ರವರು ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ಪಾವತಿಸಬೇಕಾದ ಬಾಕಿ ಶುಲ್ಕ ಮೊತ್ತ ₹ 1,63,83,500.00ಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

5 ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:
1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಗಳು,
8. ಉಪ ಅರಣ್ಯ ಸಂರಕ್ಷಣಾಧಿಕಾರಿ ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಗಳು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಮೆ:: ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್ಎಲ್‌ಪಿ, ಎನರ್ಕಾನ್ ಟವರ್, ಎ-9, ವೀರ ಇಂಡಸ್ಟ್ರಿಯಲ್ ಎಸ್ಟೇಟ್, ವೀರ ದೇಸಾಯಿ ರಸ್ತೆ, ಅಂಧೇರಿ (ವೆಸ್ಟ್) ಮುಂಬೈ -- 400 053.
12. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.